## ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ಅಭಿಮತ

# ಯುವಕರ ನಗರ ವಲಸೆ ಆತಂಕಕಾರಿ

ಪ್ರಜಾವಾಣಿ ವಾರ್ತೆ

ಯಲ್ಲಾಪುರ: 'ಹಳ್ಳಿಯ ಯುವಕರು ನಗರ ಜೀವನದತ್ತ ಮುಖಮಾಡಿದ್ದಾರೆ. ಇದು ಆತಂಕದ ವಿಷಯ. ಕಷ್ಟವಾದರೂ ದೇವಸ್ಥಾನ ನಿರ್ಮಿಸುತ್ತಿದ್ದೀರಿ. ದೇವಸ್ಥಾನದಲ್ಲಿ ಪೂಜೆ ವಿಧಿ-ವಿಧಾನಗಳು ಮುಂದಿನ ತಲೆಮಾರಿಗೂ ಮುಂದುವರಿಯಬೇಕು' ಎಂದು ಸ್ವರ್ಣವಲ್ಲಿ ಮಠದ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಬೀಗಾರದಲ್ಲಿ ಸೋಮವಾರ ಲಕ್ಷ್ಮೀನರಸಿಂಹ ದೇವಸ್ಥಾನದ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಅವರು ಆಶೀರ್ವಚನ ನೀಡಿದರು.

'ಮಂದಿರ, ಕೆರೆ, ಸರೋವರಗಳ ನಿರ್ಮಾಣಕ್ಕೆ ನೀಡಿದ ದಾನ ಮತ್ತು ಅನ್ನದಾನ ಶ್ರೇಷ್ಠವಾದುದು. ಆದರೆ ದಾನ ನೀಡುವ ಹಣ ನಮ್ಮ ಸ್ವಂತ ಸಂಪಾದನೆಯಾಗಿರಬೇಕು' ಎಂದರು.




ಬೀಗಾರ ಲಕ್ಷ್ಮೀನರಸಿಂಹ ದೇವಸ್ಥಾನದ ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತ ತಮ್ಮಣ್ಣ ಬೀಗಾರ ಅವರನ್ನು ಸನ್ಮಾನಿಸಲಾಯಿತು.

ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಿಕೇಂದ್ರೀಕರಣ ಸಮಿತಿ ಉಪಾಧ್ಯಕ್ಷ ಪ್ರಮೋದ ಹೆಗಡೆ, 'ಸ್ವರ್ಣವಲ್ಲಿ ಸ್ವಾಮೀಜಿಗಳಂತಹ ಪುಣ್ಯವಂತರ ತಪಸ್ಸಿನಿಂದ ಧರ್ಮಾಚರಣೆ ವಿಸ್ತಾರಗೊಳ್ಳುತ್ತಿದೆ' ಎಂದರು.

ಉಪನ್ಯಾಸಕ ಗಣಪತಿ ಭಟ್ಟ ಮಾತನಾಡಿದರು. ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತ ತಮ್ಮಣ್ಣ ಬೀಗಾರ ಅವರನ್ನು ಸನ್ಮಾನಿಸಲಾಯಿತು. ಗುಜರಾತ್‌ನ ಹೆಚ್ಚುವರಿ ಪೋಲೀಸ್ ಮಹಾ ನಿರ್ದೇಶಕ ನರಸಿಂಹ ಕೋಮಾರ, ಸ್ವರ್ಣವಲ್ಲಿ ಮಠದ ವ್ಯವಸ್ಥಾಪಕ ಎಸ್.ಎನ್.ಗಾಂವ್ಕರ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಯೋಜನಾಧಿಕಾರಿ ಹನುಮಂತ ನಾಯ್ಕ ಇದ್ದರು.

ಲೋಕಧ್ವನಿ

# ಅನ್ನದಾನ ಅತ್ಯಂತ ಶ್ರೇಷ್ಠವಾದುದು: ಸ್ವರ್ಣವಲ್ಲೀ ಶ್ರೀ

**ಯಲ್ಲಾಪುರ:** ನಾವು ಮಾಡಿದ ದಾನ- ಧರ್ಮಾದಿಗಳು ಮಾತ್ರ ನಮ್ಮ ಬೆನ್ನಿಗೆ ನಿಲ್ಲುತ್ತವೆ. ಅದರಲ್ಲೂ ಮಂದಿರ, ಕೆರೆ, ಸರೋವರಗಳ ನಿರ್ಮಾಣಕ್ಕೆ ನೀಡಿದ ಮತ್ತು ಅನ್ನದಾನ ಅತ್ಯಂತ ಶ್ರೇಷ್ಠವಾದುದು ಎಂದು ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನದ ಮಠಾಧೀಶ ಗಂಗಾಧರೇಂದ್ರ ಸರಸ್ವತೀ ಮಹಾಸ್ವಾಮಿಗಳು ಹೇಳಿದರು.

ಅವರು ಬೀಗಾರ-ತಾರಗಾರಿನ ಶ್ರೀಲಕ್ಷ್ಮೀ ನರಸಿಂಹ ದೇವಸ್ಥಾನದ ನೂತನ ಶಿಲಾಮಯ ಮಂದಿರದ ಪ್ರತಿಷ್ಠಾಪನಾ ಮಹೋತ್ಸವದ ಸಾನಿಧ್ಯವಹಿಸಿ, ಕೇಂದ್ರ ಸಾಹಿತ್ಯ ಅಕಾಡೆಮಿ ಬಾಲ ಸಾಹಿತ್ಯ ಪುರಸ್ಕೃತ ತಮ್ಮಣ್ಣ ಕೋಮಾರ ಬೀಗಾರ ಅವರನ್ನು ಸನ್ಮಾನಿಸಿ, ಆಶೀರ್ವಚನ ನೀಡಿದರು.

ಯಜ್ಞ-ಯಾಗಾದಿಗಳಿಗೆ ನೀಡಿದ ದಾನವೂ ನಮ್ಮನ್ನು ಹಿಂಬಾಲಿಸಿಕೊಂಡು ಬರುತ್ತದೆ. ಅದು ನಮ್ಮ ಸ್ವಂತ ದುಡಿಮೆಯಿಂದ ಬಂದಿದ್ದಾಗಿರಬೇಕು ಎಂದು ಹೇಳಿದರು. ಹಳ್ಳಿಯ ಯುವಕರು ದೇಶ-ವಿದೇಶದ ಮಹಾನಗರಗಳಿಗೆ ವಲಸೆಹೋಗುತ್ತಿದ್ದಾರೆ. ಇದು ಹಳ್ಳಿಗಳಿಗೆ ಆತಂಕದ ವಿಷಯ. ದೇವಸ್ಥಾನ ನಿರ್ಮಿಸುವುದು ಕಷ್ಟವಾದರೂ ನಿರ್ಮಿಸುತ್ತಿದ್ದೀರಿ. ಆದರೆ ಅದರ ಜೊತೆ ಪೂಜೆ ವಿಧಿ-ವಿಧಾನಗಳು ಮುಂದಿನ ತಲೆಮಾರಿಗೂ ಮುಂದುವರಿಯುವಂತಾಗಬೇಕು ಎಂದು ಹೇಳಿದರು.

ಸಚಿವ ಶಿವರಾಮ ಹೆಬ್ಬಾರ್ ಮಾತನಾಡಿ, ಇಲ್ಲಿ ಸುಂದರವಾದ ಮಂದಿರ ನಿರ್ಮಾಣಕ್ಕೆ ಎಲ್ಲರೂ ಸಾಕಷ್ಟು ಪ್ರಯತ್ನ ಪಟ್ಟಿದ್ದಾರೆ. ಈ ಪ್ರದೇಶದ ಜನರಲ್ಲಿ ಸದಾ ಶ್ರದ್ಧೆ, ವಿಶ್ವಾಸ, ಪ್ರೀತಿಯನ್ನು ಕಾಣಬಹುದು. ನಿಮ್ಮ ಊರಿನ ಅಭಿವೃದ್ಧಿಗಾಗಿ ನಾನು ಎಲ್ಲ ರೀತಿಯ ನೆರವನ್ನು ನೀಡಲು ಬದ್ಧನಾಗಿದ್ದೇನೆ ಎಂದರು. ಗುಜರಾತ್ ರಾಜ್ಯದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ನರಸಿಂಹ ಕೋಮಾರ, ಸ್ವರ್ಣವಲ್ಲಿ ಮಠದ ವ್ಯವಸ್ಥಾಪಕ ಎಸ್.ಎನ್.ಗಾಂವ್ಕರ್ ಉಪಸ್ಥಿತರಿದ್ದರು.

